

ಸೃಜನ್

# ಕವಿತೆ ಬರೆಯುವವರ ಪರವಾಗಿ



ನನ್ನ ಬರಹದ
'ನಾನು'
ನಾನೇ ಎಂಬ ಸಂಶಯ ಬೇಡ
ಹಾಗೆಯೇ ಅಲ್ಲಿನ
'ನೀನು'
ನೀನೆಂದು ಅಲ್ಲವೇ ಅಲ್ಲ
ಇಲ್ಲಿಯ
'ಅವನು–ಅವಳು'
ನಾನಲ್ಲವೆಂದು
ಪ್ರಮಾಣಿಸಲಾರೆ
ಮತ್ತು
ನೀನಲ್ಲವೆಂದೂ ನಂಬಬೇಕಿಲ್ಲ.

ಕೆಲವೊಮ್ಮೆ
ಹೀಗೆ
ಮತ್ತೆ ಕೆಲವೊಮ್ಮೆ
ಹಾಗೆ
ಯಾರು ಎಂಬ ಕುತೂಹಲ
ಬಿಟ್ಟು ಯಾರೋ ಎಂಬ
ಸಮಾಧಾನ ಒಳ್ಳೆಯದು
ನಿಮಗೂ...
ನನಗೂ!

● ತಲಕಾಡು ಶ್ರೀನಿಧಿ

